ಕರ್ನಾಟಕ ವಿಧಾನ ಸಭೆ

ಶುಕ್ರವಾರ 27ನೇ ಜುಲೈ 2007ರಂದು ಸದನವು
ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ
ಬೆಳಿಗ್ಗೆ 10 ಗಂಟೆ 35 ನಿಮಿಷಕ್ಕೆ ಸಮಾವೇಶಗೊಂಡಿತು.
ಅಧ್ಯಕ್ಷರು : ಶ್ರೀ ಕೃಷ್ಣರವರು ಪೀಠವನ್ನು ಅಲಂಕರಿಸಿದ್ದರು.

(10–00 AM)

1. ವರದಿಯನ್ನೊಪ್ಪಿಸುವುದು :

2006–07ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 18ನೇ ವರದಿ :

ಶ್ರೀಮತಿ ಶಕುಂತಲಾ ಟಿ.ಶೆಟ್ಟಿ : ಮಾನ್ಯ ಅಧ್ಯಕ್ಷರೆ, 12ನೇ ವಿಧಾನ ಸಭೆಯ 2006–07ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆಯಾದ ನಾನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಸತಿ ಇಲಾಖೆ, ಉದ್ಯೋಗ ಮತ್ತು ತರಬೇತಿ ಇಲಾಖೆ, ಯುವಜನ ಮತ್ತು ಕ್ರೀಡಾ ಇಲಾಖೆ, ಪಶುಸಂಗೋಪನಾ ಹಾಗೂ ಮೀನುಗಾರಿಕಾ ಇಲಾಖೆ ಹಾಗೂ ಸಹಕಾರ ಇಲಾಖೆಗಳ ಕಾರ್ಯಚಟುವ ಟಿಕೆಗಳಿಗೆ ಸಂಬಂಧಿಸಿದ 18ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಒಪ್ಪಿಸಲಾಯಿತು.

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು (ಶ್ರೀ ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ ಭಾರತದ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್, 2006ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಪಂಚಾಯತ್‌ರಾಜ್ ಸಂಸ್ಥೆಗಳ ಲೆಕ್ಕ ಪರಿಶೋಧನಾ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಶ್ರೀ ಆರ್.ಅಶೋಕ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು :

I (ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯಮಂತ್ರಿ) ಅವರ ಪರವಾಗಿ)

ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಅನ್ವಯ :